**All India Radio: Bangalore**
**Regional Bulletin In Kannada**
**17.05.2025 / 1.10 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**********

ಮುಖ್ಯಾಂಶಗಳು

೧. ಪಹಲ್ಗಾಮ್ ದಾಳಿಯ ಕುರಿತು ವಿದೇಶಗಳಲ್ಲಿ ಭಾರತೀಯ ನಿಯೋಗಗಳ ನೇತೃತ್ವ ವಹಿಸಲಿರುವ ಶಶಿ ತರೂರ್, ಸುಪ್ರಿಯಾ ಸುಲೆ ಸೇರಿದಂತೆ ೭ ಸಂಸದರ ತಂಡ

೨. ೧೫೦ ಶತಕೋಟಿ ಅಂಕಗಳನ್ನು ದಾಟಿದ ಆಧಾರ್ ದೃಢೀಕರಣ ವಹಿವಾಟು ಸಂಖ್ಯೆ

೩. ಭಾರತೀಯ ಬಯೋಟೆಕ್ ಕಂಪನಿಗಳು mಖಓಂ-ಆಧಾರಿತ ಲಸಿಕೆಗಳು ಮತ್ತು ಚಿಕಿತ್ಸಕಗಳನ್ನು ಸಕ್ರಿಯವಾಗಿ ಅಭಿವೃದ್ಧಿಪಡಿಸುತ್ತಿವೆ - ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

೪. ಐಪಿಎಲ್ ಟಿ-೨೦ ಕ್ರಿಕೆಟ್; ಬೆಂಗಳೂರಿನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಕೋಲ್ಕತ್ತಾ ನೈಟ್ ರೈಡರ್ಸ್ ಮುಖಾಮುಖಿ

*********

ಆಪರೇಷನ್ ಸಿಂದೂರ್ ನಂತರ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವನ್ನು ಮಂಡಿಸಲು ಕೇಂದ್ರ ಸರ್ಕಾರವು ವಿವಿಧ ದೇಶಗಳಿಗೆ ಬಹುಪಕ್ಷಗಳ ನಿಯೋಗಗಳನ್ನು ಕಳುಹಿಸಲಿದೆ. ಹಿರಿಯ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಈ ರಾಜತಾಂತ್ರಿಕ ಸಂಪರ್ಕ ಉಪಕ್ರಮದ ಕುರಿತು ತಮ್ಮ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಮಾತನಾಡಿದ್ದಾರೆ. ಪಾಕಿಸ್ತಾನದಿಂದ ನಡೆಯುತ್ತಿರುವ ಭಯೋತ್ಪಾದನೆಯ ಕುರಿತು ಸರ್ಕಾರದ ನಿಲುವನ್ನು ಜಾಗತಿಕ ಸಮುದಾಯಕ್ಕೆ ತಿಳಿಸುವ ಉದ್ದೇಶವನ್ನು ಈ ಕ್ರಮ ಹೊಂದಿದೆ ಎಂದು ಹೇಳಿದ್ದಾರೆ. ಏಳು ನಿಯೋಗಗಳಲ್ಲಿ ವಿವಿಧ ಪಕ್ಷಗಳ

ಸಂಸದರು, ಪ್ರಮುಖ ರಾಜಕೀಯ ವ್ಯಕ್ತಿಗಳು ಮತ್ತು ಹಿರಿಯ ರಾಜತಾಂತ್ರಿಕರನ್ನು ಒಳಗೊಂಡಿರುತ್ತದೆ.

*********

ಕಾಂಗ್ರೆಸ್‌ನ ಶಶಿ ತರೂರ್, ಬಿಜೆಪಿಯ ರವಿಶಂಕರ್ ಪ್ರಸಾದ್ ಮತ್ತು ಬೈಜಯಂತ್ ಪಾಂಡ, ಜೆಡಿಯುನ ಸಂಜಯ್ ಕುಮಾರ್ ಝಾ, ಡಿಎಂಕೆಯ ಕನಿಮೋಳಿ ಕರುಣಾನಿಧಿ, ಸುಪ್ರಿಯಾ ಸುಳೆ ಮತ್ತು ಶಿವಸೇನೆಯ ಶ್ರೀಕಾಂತ್ ಏಕನಾಥ್ ಶಿಂಧೆ ನಿಯೋಗಗಳ ನೇತೃತ್ವ ವಹಿಸುವ ಸಂಸದರಲ್ಲಿ ಸೇರಿದ್ದಾರೆ. ಸಂಸದೀಯ ವ್ಯವಹಾರಗಳ ಸಚಿವಾಲಯದ ಪ್ರಕಾರ, "'ಆಪರೇಷನ್ ಸಿಂಧೂರ್' ಮತ್ತು ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಭಾರತದ ನಿರಂತರ ಹೋರಾಟದ ಸಂದರ್ಭದಲ್ಲಿ, ಏಳು ಸರ್ವಪಕ್ಷ ನಿಯೋಗಗಳು ಈ ತಿಂಗಳ ಕೊನೆಯಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸದಸ್ಯರು ಸೇರಿದಂತೆ ಪ್ರಮುಖ ಪಾಲುದಾರ ರಾಷ್ಟ್ರಗಳಿಗೆ ಭೇಟಿ ನೀಡಲಿವೆ" ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಯುನೈಟೆಡ್ ಅರಬ್ ಎಮಿರೇಟ್ಸ್, ಕತಾರ್, ದಕ್ಷಿಣ ಆಫ್ರಿಕಾ, ಈಜಿಪ್ಟ್, ಅಮೇರಿಕಾ ಮತ್ತು ಜಪಾನ್‌ಗೆ ನಿಯೋಗಗಳನ್ನು ಕಳುಹಿಸಲಾಗುವುದು. ಭಯೋತ್ಪಾದನೆಯ ವಿರುದ್ಧ ಭಾರತದ ಏಕೀಕೃತ ರಾಜಕೀಯ ನಿಲುವನ್ನು ತಿಳಿಸುವುದು ಮತ್ತು ಪಾಕಿಸ್ತಾನವನ್ನು ಹೊಣೆಗಾರರನ್ನಾಗಿ ಮಾಡಲು ಅಂತರರಾಷ್ಟ್ರೀಯ ಬೆಂಬಲವನ್ನು ಪಡೆಯುವುದು ನಿಯೋಗಗಳ ಗುರಿಯಾಗಿದೆ. ಬಿಜೆಪಿ ನಾಯಕರಾದ ಅನುರಾಗ್ ಠಾಕೂರ್, ರಾಜೀವ್ ಪ್ರತಾಪ್ ರೂಡಿ ಮತ್ತು ತೇಜಸ್ವಿ ಸೂರ್ಯ, ಟಿಡಿಪಿಯ ಲಾವು ಶ್ರೀ ಕೃಷ್ಣ ದೇವರಾಯಲು, ಕಾಂಗ್ರೆಸ್ ಸಂಸದ ಮನೀಶ್ ತಿವಾರಿ ಮತ್ತು ಎಐಎಂಐಎಂ ನಾಯಕ ಅಸಾದುದ್ದೀನ್ ಓವೈಸಿ ಸೇರಿದಂತೆ ಇತರ ಸಂಸದರು ಭಾಗವಹಿಸುವ ನಿರೀಕ್ಷೆಯಿದೆ.

*********

ಕಾಶ್ಮೀರ ಸಮಸ್ಯೆಯನ್ನು ಅಂತರ ರಾಷ್ಟ್ರೀಕರಣಗೊಳಿಸಲು ಪಾಕಿಸ್ತಾನದ ಪ್ರಯತ್ನಗಳಿಗೆ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ನಿಯೋಗಗಳನ್ನು ಕಳುಹಿಸುವ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಮೂಲಗಳು ಸೂಚಿಸಿವೆ. ಈ ನಡುವೆ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಏಳು ಸರ್ವಪಕ್ಷ ನಿಯೋಗಗಳು ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶವನ್ನು ಕೊಂಡೊಯ್ಯಲಿವೆ, ಇದು ಭಿನ್ನಾಭಿಪ್ರಾಯಗಳು ,ರಾಜಕೀಯವನ್ನು ಮೀರಿ ರಾಷ್ಟ್ರೀಯ ಏಕತೆಯ

ಪ್ರಬಲ ಪ್ರತಿಬಿಂಬವಾಗಿ ನಿಂತಿದೆ. ಅತ್ಯಂತ ಮುಖ್ಯವಾದ ಕ್ಷಣಗಳಲ್ಲಿ, ಭಾರತವು ಒಗ್ಗಟ್ಟಿನಿಂದ ನಿಂತಿದೆ ಎಂದು ಅವರು ಹೇಳಿದ್ದಾರೆ.

*********

ಆಧಾರ್ ದೃಢೀಕರಣ ವಹಿವಾಟುಗಳ ಒಟ್ಟು ಸಂಖ್ಯೆ ೧೫೦ ಶತಕೋಟಿ ದಾಟಿದೆ. ಇದು ಭಾರತದ ವಿಶಿಷ್ಟ ಗುರುತಿನ ಪ್ರಾಧಿಕಾರ - ಯುಐಡಿಎಐನ ಪ್ರಂiiಣದಲ್ಲಿ ಮತ್ತು ವಿಶಾಲವಾದ ಆಧಾರ್ ಪರಿಸರ ವ್ಯವಸ್ಥೆಗೆ ಒಂದು ಮೈಲಿಗಲ್ಲಾಗಿದೆ. ಈ ಮೈಲಿಗಲ್ಲು ಆಧಾರ್‌ನ ವ್ಯಾಪಕ ಬಳಕೆ ಉಪಯುಕ್ತತೆ ಮತ್ತು ದೇಶದಲ್ಲಿ ಡಿಜಿಟಲ್ ಆರ್ಥಿಕತೆಯ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ. ಈ ಪ್ರಕ್ರಿಯೆಯು ಆರಂಭವಾದಗಿನಿಂದ ಏಪ್ರಿಲ್ ೨೦೨೫ ರ ಅಂತ್ಯದ ವೇಳೆಗೆ ಸಂಚಿತ ಸಂಖ್ಯೆಯನ್ನು ಸಾಧಿಸಲಾಗಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಏಪ್ರಿಲ್‌ನಲ್ಲಿ ಮಾತ್ರ ಸುಮಾರು ೨೧೦ ಕೋಟಿ ಆಧಾರ್ ದೃಢೀಕರಣ ವಹಿವಾಟುಗಳನ್ನು ನಡೆಸಲಾಗಿದೆ.

*********

ಭಾರತೀಯ ಬಯೋಟೆಕ್ ಕಂಪನಿಗಳು mಖಓಂ-ಆಧಾರಿತ ಲಸಿಕೆಗಳನ್ನು ಸಕ್ರಿಯವಾಗಿ ಅಭಿವೃದ್ಧಿಪಡಿಸುತ್ತಿವೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯದ ಜೈವಿಕ ತಂತ್ರಜ್ಞಾನ ಇಲಾಖೆಯ  ವಿಜ್ಞಾನಿಗಳ ತಂಡ ತಿಳಿಸಿದೆ. ಜೈವಿಕ ತಂತ್ರಜ್ಞಾನ ಉದ್ಯಮ ಸಂಶೋಧನಾ ಸಹಾಯ ಮಂಡಳಿ ಮತ್ತು ಜೈವಿಕ ಉತ್ಪಾದನಾ ಉಪಕ್ರಮದ ವೆಬಿನಾರ್ ಸರಣಿ' ಅಡಿಯಲ್ಲಿ ೧೪ ನೇ ವೆಬಿನಾರ್‌ನಲ್ಲಿ ಈ ಅಂಶದ ಪ್ರಸ್ತಾವನೆಯಾಗಿದೆ.  ಅಧಿವೇಶನವು "mಖಓಂ ಚಿಕಿತ್ಸಕಗಳಿಗಾಗಿ ಬಯೋಮ್ಯಾನುಫ್ಯಾಕ್ಚರಿಂಗ್" ಅನ್ನು ಕೇಂದ್ರೀಕರಿಸಿದೆ, ಇದು ಬಯೋ-ಇ೩ ಅಂದರೆ (ಆರ್ಥಿಕತೆ, ಪರಿಸರ ಮತ್ತು ಉದ್ಯೋಗಕ್ಕಾಗಿ ಜೈವಿಕ ತಂತ್ರಜ್ಞಾನ) ನೀತಿಯ ಅಡಿಯಲ್ಲಿ ಪ್ರಮುಖ ಅಂಶವಾಗಿದೆ. "ಸುಸ್ಥಿರ ಹಸಿರು ಬೆಳವಣಿಗೆಯನ್ನು ಬೆಂಬಲಿಸುವ ಮೂಲಕ ಹೆಚ್ಚಿನ ಕಾರ್ಯಕ್ಷಮತೆಯ ಜೈವಿಕ ಉತ್ಪಾದನೆಯನ್ನು ಬೆಳೆಸುವುದು ಬಯೋ-ಇ೩ ನೀತಿಯ ದೃಷ್ಟಿಕೋನವಾಗಿದೆ ಎಂದು ಡಿಬಿಟಿಯ ಹಿರಿಯ ಸಲಹೆಗಾರ ಡಾ. ಅಲ್ಕಾ ಶರ್ಮಾ ಹೇಳಿದ್ದಾರೆ. ಕೇಂದ್ರ ಸಚಿವ ಸಂಪುಟದಿಂದ ಅನುಮೋದಿಸಲ್ಪಟ್ಟ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ ಬಿಡುಗಡೆ ಮಾಡಿದ ಬಯೋಇ೩ ನೀತಿಯು ಭಾರತವನ್ನು ಜೈವಿಕ-ಆಧಾರಿತ ನಾವೀನ್ಯತೆಗಳಲ್ಲಿ ಜಾಗತಿಕ ಮಟ್ಟದಲ್ಲಿ ಕಾರ್ಯ ಕ್ಷಮತೆಯನ್ನು ಗುರುತಿಸುವ ಗುರಿಯನ್ನು ಹೊಂದಿದೆ.

*********

ಈ ವರ್ಷ ಭಾರತವು ವಿಶ್ವದಲ್ಲಿ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಉಳಿಯಲಿದೆ ಎಂದು ವಿಶ್ವಸಂಸ್ಥೆ ಹೇಳಿದೆ. ಜನವರಿಯಲ್ಲಿನ ೬.೬% ಬೆಳವಣಿಗೆಯ ಮುನ್ಸೂಚನೆಯಿಂದ ಪರಿಷ್ಕರಿಸಲ್ಪಟ್ಟಿದ್ದರೂ, ಭಾರತವು ಚೀನಾ, ಅಮೆರಿಕ ಮತ್ತು ಯುರೋಪಿಯನ್ ಒಕ್ಕೂಟದಂತಹ ಇತರ ದೊಡ್ಡ ಆರ್ಥಿಕತೆಗಳಿಗಿಂತ ಇನ್ನೂ ಮುಂದಿದೆ. ಮುಂದಿನ ವರ್ಷ, ಭಾರತದ ಆರ್ಥಿಕತೆಯು ಶೇಕಡಾ ೬.೪ ರಷ್ಟು ಬೆಳೆಯುವ ನಿರೀಕ್ಷೆಯಿದೆ, ಆದರೂ ಇದು ಹಿಂದಿನ ನಿರೀಕ್ಷೆಗಳಿಗಿಂತ ssಸಣ್ಣ ಪ್ರಮಾಣದಲ್ಲಿ ಕಡಿಮೆಯಾಗಿದೆ.

*********

ಭಯೋತ್ಪಾದನೆ ಸಂಬಂಧಿತ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ರಾಜ್ಯ ತನಿಖಾ ಸಂಸ್ಥೆ ಎಸ್ಐಎ ಇಂದು ಕಾಶ್ಮೀರ ಕಣಿವೆಯ ಹಲವಾರು ಸ್ಥಳಗಳಲ್ಲಿ ಏಕಕಾಲದಲ್ಲಿ ಹಲವು ದಾಳಿಗಳನ್ನು ಪ್ರಾರಂಭಿಸಿದೆ. ಕೇಂದ್ರ ಮೀಸಲು ಪೊಲೀಸ್ ಪಡೆ ಸಹಾಯದಿಂದ ಎಸ್ಐಎ ಅಧಿಕಾರಿಗಳು ಶ್ರೀನಗರ, ಗಂಡೇರ್‌ಬಾಲ್, ಹಂದ್ವಾರ, ಸೋಪೋರ್ ಮತ್ತು ಬಾರಾಮುಲ್ಲಾದ ೧೧ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. "ಇಂದು ದಾಳಿ ನಡೆಸುತ್ತಿರುವ ಆರೋಪಿಗಳು ಟೆಲಿಗ್ರಾಮ್, ವಾಟ್ಸಾಪ್ ಮತ್ತು ಸಿಗ್ನಲ್‌ನಂತಹ ಎನ್‌ಕ್ರಿಪ್ಟ್ ಮಾಡಿದ ವೇದಿಕೆಗಳನ್ನು ಬಳಸಿಕೊಂಡು ಭದ್ರತಾ ಪಡೆಗಳು ಮತ್ತು ನಿರ್ಣಾಯಕ ಮೂಲಸೌಕರ್ಯಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಹಂಚಿಕೊಂಡಿದ್ದಾರೆ ಎಂದು ತಿಳಿದುಬಂದಿದೆ" ಎಂದು ಮೂಲಗಳು ತಿಳಿಸಿವೆ.

*********

ದೋಹಾ ಡೈಮಂಡ್ ಲೀಗ್ ೨೦೨೫ರಲ್ಲಿ ೯೦ ಮೀಟರ್ ಮೀರಿದ ಎಸೆತದೊಂದಿಗೆ ವೈಯಕ್ತಿಕ ಅತ್ಯುತ್ತಮ ಸಾಧನೆ ತೋರಿರುವ ಒಲಿಂಪಿಯನ್ ನೀರಜ್ ಚೋಪ್ರಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ನರೇಂದ್ರ ಮೋದಿ ಈ ಸಾಧನೆಯನ್ನು ಗಮನಾರ್ಹ ಎಂದು ಬಣ್ಣಿಸಿದ್ದಾರೆ ಮತ್ತು ಕ್ರೀಡಾಪಟುವಿನ ವೈಯಕ್ತಿಕ ಅತ್ಯುತ್ತಮ ಸಾಧನೆ ಅವರ ಅಚಲ ಸಮರ್ಪಣೆ, ಶಿಸ್ತು ಮತ್ತು ಉತ್ಸಾಹದ ಪರಿಣಾಮವಾಗಿದೆ ಎಂದು ಹೇಳಿದ್ದಾರೆ. ಅವರ ಸಾಧನೆಗೆ ಭಾರತವು ಅಪಾರ ಹೆಮ್ಮೆ ಮತ್ತು ಸಂತೋಷವನ್ನು ಪಡುತ್ತದೆ ಎಂದು ಅವರು ಹೇಳಿದ್ದಾರೆ. ಹವಾಮಾನ ಇಲಾಖೆ ಮುನ್ಸೂಚನೆಯಂತೆ ಇಂದು ಅರುಣಾಚಲ ಪ್ರದೇಶ, ಅಸ್ಸಾಂ ಮತ್ತು ಮೇಘಾಲಯದ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ

ಮಳೆಯಾಗುವ ಮುನ್ಸೂಚನೆ ನೀಡಿದೆ. ಮುಂದಿನ ಏಳು ದಿನಗಳಲ್ಲಿ ಈಶಾನ್ಯ ಭಾರತವು ಗುಡುಗು, ಮಿಂಚು ಮತ್ತು ಬಿರುಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಆಂಧ್ರಪ್ರದೇಶ, ಕರ್ನಾಟಕದ ಒಳಭಾಗ, ಕೇರಳ, ಮಾಹೆ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ತೆಲಂಗಾಣದಲ್ಲಿ ಇಂದು ಭಾರಿ ಮಳೆಯಾಗಲಿದೆ. ಏತನ್ಮಧ್ಯೆ, ಪಶ್ಚಿಮ ರಾಜಸ್ಥಾನದ ಪ್ರತ್ಯೇಕ ಸ್ಥಳಗಳಲ್ಲಿ ಧೂಳಿನಿಂದ ಗಾಳಿ ಬೀಸಲಿದೆ. ಜಮ್ಮು-ಕಾಶ್ಮೀರ, ನೈಋತ್ಯ ಉತ್ತರ ಪ್ರದೇಶದ ಪ್ರತ್ಯೇಕ ಪ್ರದೇಶಗಳಲ್ಲಿ ಉಷ್ಣ ಅಲೆಯ ಪರಿಸ್ಥಿತಿ ಉಂಟಾಗಲಿದೆ, ಆದರೆ ಬಿಹಾರ ಮತ್ತು ಒಡಿಶಾದಲ್ಲಿ ಬಿಸಿ ಮತ್ತು ತೇವಾಂಶದ ಹವಾಮಾನ ಉಂಟಾಗಲಿದೆ ಎಂದು ಹವಾಮಾನ ಇಲಾಖೆ  ತಿಳಿಸಿದೆ.

---

*********